# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **2471** |
| ಉತ್ತರಿಸಬೇಕಾದ ದಿನಾಂಕ | : | 23.03.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ನೆಲ್ಲಿಹುದಿಕೇರಿ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳ ಮಳೆಹಾನಿ ಸಂತ್ರಸ್ತರಿಗೆ ಹಂಚಿಕೆ ಮಾಡಲು ನಿವೇಶನಗಳನ್ನು ಗುರುತಿಸಿದ್ದರೂ ಕೂಡ, ಇದುವರೆಗೂ ಹಕ್ಕುಪತ್ರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ ಇವರ ಕಚೇರಿಯಿಂದ ಪಡೆದ ಮಾಹಿತಿಯಂತೆ, ಕೊಡಗು ಜಿಲ್ಲೆಯ ನೆಲ್ಲಿಹುದಿಕೇರಿ, ವಾಲ್ನೂರು ತ್ಯಾಗತ್ತೂರು, ನಂಜರಾಯಪಟ್ಟಣ, ಗುಡ್ಡೆಹೊಸೂರು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಪ್ರತಿ ವರ್ಷ ನದಿ ದಡದ ಮನೆಗಳು ಕಾವೇರಿ ನದಿ ಪ್ರವಾಹಕ್ಕೆ ಒಳಪಡುತ್ತಿದ್ದು, ಇವರಿಗೆ ಶಾಶ್ವತ ನಿವೇಶನ/ಪುರ್ನವಸತಿ ಒದಗಿಸಲು 2019 ರಲ್ಲಿ ಅಭ್ಯತ್ ಮಂಗಲ ಗ್ರಾಮದ ಸರ್ವೆ ನಂ. 87/2ರಲ್ಲಿ 8.22 ಎಕರೆ ಸರ್ಕಾರಿ ಜಾಗವನ್ನು ಕಾಯ್ದಿರಿಸಿ, ಸದರಿ ಜಮೀನನ್ನು ಕಾರ್ಯನಿರ್ವಾಹಕಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಸೋಮವಾರಪೇಟೆ ತಾಲ್ಲೂಕು ಇವರಿಗೆ ಹಸ್ತಾಂತರಿಸಲಾಗಿರುತ್ತದೆ ಮತ್ತು ಸದರಿ ಜಾಗವನ್ನು ಅಭಿವೃದ್ಧಿಪಡಿಸಿದ ನಂತರ ನಿವೇಶನ ಹಕ್ಕು ಪತ್ರ ಹಂಚಿಕೆ ಮಾಡಲಾಗುವುದು. |
| ಆ) | ಬಂದಿದ್ದಲ್ಲಿ, ಮಳೆಹಾನಿ ಸಂತ್ರಸ್ತರಿಗೆ ಇದುವರೆಗೆ ಹಕ್ಕುಪತ್ರಗಳನ್ನು ನೀಡದಿರಲು ಕಾರಣಗಳೇನು ; | ಸದರಿ ಜಾಗಕ್ಕೆ ಅಗತ್ಯ ಮೂಲಸೌಕರ್ಯಗಳಾದ ರಸ್ತೆ, ನೀರು, ವಿದುಚ್ಚಕ್ತಿ ಸೌಲಭ್ಯ ಒದಗಿಸಬೇಕಾಗಿದ್ದು, ಈ ಜಮೀನಿನಲ್ಲಿ ನಿವೇಶನಗಳ ರಚನೆ ಮತ್ತು ಅಭಿವೃದ್ಧಿಗೆ ಅನುದಾನ ಕೋರಿರುವ ಜಿಲ್ಲಾಧಿಕಾರಿಗಳ ಪ್ರಸ್ತಾವನೆ ಆಧರಿಸಿ ಸರ್ಕಾರದ ಆದೇಶ ಸಂಖ್ಯೆ:ವಇ 54 ಹೆಚ್ಎಎಸ್ 2014, ದಿನಾಂಕ: 25.07.2014 ಮತ್ತು 11.08.2014ರಂತೆ ಪ್ರತಿ ನಿವೇಶನಕ್ಕೆ ಗ್ರಾಮೀಣ ಪ್ರದೇಶದಲ್ಲಿ ರೂ.3000/-ಗಳಂತೆ 144 ನಿವೇಶನಗಳ ರಚನೆ ಮತ್ತು ಅಭಿವೃದ್ಧಿಗೆ ರೂ.4,32,000/-ಗಳನ್ನು ಜಿಲ್ಲಾಧಿಕಾರಿಗಳ ಖಾತೆಗೆ ಬಿಡುಗಡೆ ಮಾಡಲಾಗಿದೆ.<br><br>ಗುರುತಿಸಲಾಗಿರುವ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ವಿತರಿಸಲು ಫಲಾನುಭವಿಗಳ ಪಟ್ಟಿಯನ್ನು ನಿಯಮಾನುಸಾರ Online ನಲ್ಲಿ ಸಲ್ಲಿಸಲು ಸಂಬಂಧಪಟ್ಟ ಅನುಷ್ಠಾನಾಧಿಕಾರಿಗಳಿಗೆ ತಿಳಿಸಲಾಗಿದೆ. |
| ಇ) | ಜಿಲ್ಲೆಯಲ್ಲಿ, ಎಷ್ಟು ಜನ ಮಳೆಹಾನಿ ಸಂತ್ರಸ್ತರನ್ನು ನಿವೇಶನದ ಹಕ್ಕುಪತ್ರ ನೀಡಲು ಇದುವರೆಗೆ ಗುರುತಿಸಲಾಗಿದೆ ; | ಕೊಡಗು ಜಿಲ್ಲೆಯಲ್ಲಿ ಹಕ್ಕುಪತ್ರ ನೀಡಲು 95 ಸಂತ್ರಸ್ತರನ್ನು ಗುರುತಿಸಲಾಗಿದೆ. |

| | | |
|---|---|---|
| ಈ) | ಇದುವರೆಗೆ ಎಷ್ಟು ಜನ ಮಳೆಹಾನಿ ಸಂತ್ರಸ್ತರಿಗೆ ಹಕ್ಕುಪತ್ರ ನೀಡಲಾಗಿದೆ; ಹಕ್ಕುಪತ್ರ ನೀಡಲು ಬಾಕಿ ಇರುವ ಮಳೆಹಾನಿ ಸಂತ್ರಸ್ತರ ಸಂಖ್ಯೆ ಎಷ್ಟು; | ಅಭ್ಯತ್ ಮಂಗಲ ಗ್ರಾಮದ ಸರ್ವೆ ನಂ.87/2ರಲ್ಲಿ ಯಾವುದೇ ಫಲಾನುಭವಿಗಳಿಗೆ ಹಕ್ಕುಪತ್ರ ಹಂಚಿಕೆ ಮಾಡಿರುವುದಿಲ್ಲ. ಈಗಾಗಲೇ ಗುರುತಿಸಿರುವ 95 ಸಂತ್ರಸ್ಥರಿಗೆ ಹಕ್ಕುಪತ್ರ ಹಂಚಿಕೆ ಮಾಡಬೇಕಾಗಿರುತ್ತದೆ. |
| ಉ) | ಜಿಲ್ಲೆಯಲ್ಲಿ, ಹಕ್ಕುಪತ್ರ ನೀಡಲು ಬಾಕಿ ಇರುವ ಮಳೆಹಾನಿ ಸಂತ್ರಸ್ತರಿಗೆ ಯಾವಾಗ ಹಕ್ಕುಪತ್ರ ನೀಡಲಾಗುವುದು ? | ಅಭ್ಯತ್ ಮಂಗಲ ಗ್ರಾಮದ ಸರ್ವೆ ನಂ.87/2 ರಲ್ಲಿ ಮರ ತೆರವು ಮತ್ತು ಮೂಲಭೂತ ಸೌಕರ್ಯ ಕಲ್ಪಿಸಿದ ಕೂಡಲೇ ಹಕ್ಕುಪತ್ರ ನೀಡಲಾಗುವುದು. |

ಸಂಖ್ಯೆ :ವಇ 165 ಹೆಚ್ಎಎಂ 2022

(ವಿ. ಸೋಮಣ್ಣ)
**ವಸತಿ ಮತ್ತು ಮೂಲಸೌಲಭ್ಯ**
**ಅಭಿವೃದ್ಧಿ ಸಚಿವರು**